# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಮಂಗಳವಾರ, ದಿನಾಂಕ:21ನೇ ಡಿಸೆಂಬರ್, 2021
## (ಸಮಯ: ಬೆಳಗ್ಗೆ: 10.30 ಗಂಟೆಗೆ)

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಗೋವಿಂದರಾಜು** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 57 (455) } ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

## 02. ಚುನಾವಣಾ ಪ್ರಸ್ತಾವ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಮಾನ್ಯ ಸಭಾನಾಯಕರು ಹಾಗೂ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:-**

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿಗೆ ವಿಧಾನ ಪರಿಷತ್ತಿನ ಇಬ್ಬರು ಸದಸ್ಯರುಗಳನ್ನು ಚುನಾಯಿಸುವ ಬದಲು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

## 03. ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಜ್ವಲಂತ ಸಮಸ್ಯೆಗಳ ಕುರಿತು ಚರ್ಚೆ

ಶ್ರೀಯುತರುಗಳಾದ

| | |
|---|---|
| 1. ಶ್ರೀಕಂಠೇಗೌಡ, ಮರಿತಿಬ್ಬೇಗೌಡ, ಕೆ.ಎ.ತಿಪ್ಪೇಸ್ವಾಮಿ ಹಾಗೂ ಇತರರುಗಳು | ಪ್ರಮುಖ ನೀರಾವರಿ ಯೋಜನೆಗಳಾದ ಕೃಷ್ಣಾ ಮೇಲ್ದಂಡೆ ಯೋಜನೆ-3ನೆ ಹಂತದ ಅನುಷ್ಠಾನ, ಮಹದಾಯಿ ಜಲವಿವಾದ ಕುರಿತು ಚರ್ಚೆ. |
| 2. ಎಸ್.ಆರ್. ಪಾಟೀಲ್, ವಿಪನಾ | ಆಲಮಟ್ಟಿ ಜಲಾಶಯವನ್ನು ಎತ್ತರಿಸಿರುವುದರಿಂದ ಮುಳುಗಡೆಯಾದ ಜಮೀನುಗಳ ಮಾಲೀಕರುಗಳಿಗೆ ಅನ್ಯಾಯವಾಗಿರುವ ಕುರಿತು ಚರ್ಚೆ. |

..2..

| | |
|---|---|
| 3.ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ | ಬೆಳಗಾವಿ ಸ್ಮಾರ್ಟ್ ಸಿಟಿ ಯೋಜನೆಗಳ ಕಾಮಗಾರಿಗಳು ವಿಳಂಬವಾಗುತ್ತಿರುವ ಕುರಿತು. |
| 4.ಯು.ಬಿ.ವೆಂಕಟೇಶ್ | 371ಜೆ ಅನುಷ್ಠಾನಗೊಳಿಸುವಲ್ಲಿ ವಿಳಂಬವಾಗಿರುವುದರಿಂದ ಅಭಿವೃದ್ಧಿ ಕುಂಠಿತವಾಗಿರುವ ಕುರಿತು ಚರ್ಚೆ |
| 5. ಪ್ರಕಾಶ್ ಕೆ. ರಾಥೋಡ್ | ವಿಜಯಪುರ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ರಸ್ತೆಗಳು ಸಂಪೂರ್ಣ ಹಾಳಾಗಿರುವ ಕುರಿತು ಚರ್ಚೆ |

## 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಕೆ.ಟಿ.ಶ್ರೀಕಂಠೇಗೌಡ, ಪುಟ್ಟಣ್ಣ, ಅರುಣ ಶಹಾಪೂರ ಮತ್ತು ಮರಿತಿಬ್ಬೇಗೌಡ** ಅವರುಗಳು ದಿನಾಂಕ:01.08.2008ರ ನಂತರ ನೇಮಕಾತಿ ಹೊಂದಿದ್ದ ಮತ್ತು ಬಡ್ತಿ ಪಡೆದ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜಿನ ಶಿಕ್ಷಕರು ಪಡೆಯುತ್ತಿದ್ದ ವಿಶೇಷ ಭತ್ಯೆಯನ್ನು ಸ್ಥಗಿತಗೊಳಿಸಿರುವ ಆದೇಶವನ್ನು ಕೆ.ಎ.ಟಿ. ರದ್ದುಪಡಿಸಿರುವ ನಂತರವೂ ಶಿಕ್ಷಕರಿಗೆ ವಿಶೇಷ ಭತ್ಯೆಯನ್ನು ನೀಡದೆ ಇರುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

02. **ಶ್ರೀ ನಸೀರ್ ಅಹ್ಮದ್** ಅವರು ಬೆಂಗಳೂರು ನಗರದ ಬ್ಯಾಟರಾಯನಪುರ ಹಾಗೂ ವರ್ತೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕೆಲವು ದಿನಗಳ ಹಿಂದೆ ಅಲ್ಪಸಂಖ್ಯಾತರ ಯುವಕರ ಮೇಲೆ ಪೊಲೀಸರು ಅಮಾನುಷವಾಗಿ ಹಲ್ಲೆ ನಡೆಸಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

03. **ಶ್ರೀ ಪ್ರಕಾಶ್ ಕೆ.ರಾಥೋಡ್** ಅವರು ರೈತರ ಬೆಳೆ ಹಾನಿಗೆ ವಿಮಾ ಕಂಪನಿಗಳಿಂದ ಸೂಕ್ತ ಸಮಯದಲ್ಲಿ ವಿಮಾ ಪಾವತಿಯಾಗದೇ ಇರುವ ಕಾರಣ ರೈತರ ಬದುಕು ಅತಂತ್ರ ಸ್ಥಿತಿಯಲ್ಲಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

04. **ಶ್ರೀ ಅ.ದೇವೇಗೌಡ** ಅವರು ಪದವಿ ಕಾಲೇಜುಗಳಲ್ಲಿ ಸರ್ಕಾರ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಪೂರೈಸಿದ್ದರೂ ಸಹ ಸುಮಾರು 14 ಸಾವಿರ ಅತಿಥಿ ಉಪನ್ಯಾಸಕರು ಸೇವಾ ಭದ್ರತೆಯಿಂದ ವಂಚಿತರಾಗಿರುತ್ತಾರೆ. ಆದುದರಿಂದ, ಅವರುಗಳಿಗೆ ಸೇವಾ ಭದ್ರತೆ, ವೇತನ ಪಾವತಿ ಹಾಗೂ ಇತರೆ ಅರ್ಹ ಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

05. **ಶ್ರೀ ಎಂ. ನಾರಾಯಣಸ್ವಾಮಿ ವಿರೋಧ ಪಕ್ಷದ ಮುಖ್ಯ ಸಚೇತಕರವರು** ಸ್ವಾತಂತ್ರ್ಯ ಹೋರಾಟಗಾರರಿಗೆ ಹಾಗೂ ಅವರ ಕುಟುಂಬ ವರ್ಗದವರಿಗೆ ನೀಡಲಾಗುತ್ತಿರುವ ಭತ್ಯೆ ಹಾಗೂ ಸೌಲಭ್ಯಗಳನ್ನು ಹೆಚ್ಚಿಸುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

01. **ಶ್ರೀ ಪಿ.ಆರ್. ರಮೇಶ್** ಅವರು ಲೋಕಸೇವಾ ಆಯೋಗವು ಸಲ್ಲಿಸಿದ್ದ 2011ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್‌ಗಳ ಆಯ್ಕೆ ಪಟ್ಟಿ/ಸಲಹೆಗೆ ಸಂಬಂಧಿಸಿದಂತೆ ದಿನಾಂಕ:09.03.2018ರ (ರಿಟ್ ಸಂಖ್ಯೆ:13617-13627/2017 ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪನ್ನು ಪಾಲಿಸುವುದರ ಕುರಿತು ಪ್ರಸ್ತಾಪಿಸುವುದು.

..3..

೦೨. **ಶ್ರೀಯುತರುಗಳಾದ ಅರುಣ ಶಹಾಪೂರ, ಪುಟ್ಟಣ್ಣ, ಮರಿತಿಬ್ಬೇಗೌಡ ಮತ್ತು ಕೆ.ಟಿ.ಶ್ರೀಕಂಠೇಗೌಡ** ಅವರುಗಳು 1995ರ ನಂತರ ಆರಂಭವಾದ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦೩. **ಶಶೀಲ್ ಜಿ. ನಮೋಶಿ** ಅವರು ಕಲ್ಯಾಣ ಕರ್ನಾಟಕ ವಿಭಾಗದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಮಕ್ಕಳ ಶಿಕ್ಷಕರ ಅನುಪಾತದಲ್ಲಾದ (ಪಿಟಿಆರ್) ತಾರತಮ್ಯ ಹೋಗಲಾಡಿಸುವ ಕುರಿತು ಪ್ರಸ್ತಾಪಿಸುವುದು.

೦೪. **ಶ್ರೀ ಮರಿತಿಬ್ಬೇಗೌಡ** ಅವರು ಮೈಸೂರು ನಗರದಲ್ಲಿ ಪದವಿ ಪೂರ್ವ ಮತ್ತು ಪದವಿ ತರಗತಿಗಳಲ್ಲಿ ಗ್ರಾಮೀಣ ಪ್ರದೇಶದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಅಗತ್ಯಕ್ಕನುಗುಣವಾಗಿ ಹಿಂದುಳಿದ ವರ್ಗದ ವಸತಿ ನಿಲಯಗಳ ಕೊರತೆಗಳಿರುವುದರಿಂದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦೫. **ಡಾ. ವೈ.ಎ. ನಾರಾಯಣಸ್ವಾಮಿ** ಅವರು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಎತ್ತಿನ ಹೊಳೆ ಕುಡಿಯುವ ನೀರಿನ ಯೋಜನೆಗೆ ಹಣ ಬಿಡುಗಡೆಯಾಗಿದ್ದರೂ ಸಹ ಭೂಸ್ವಾಧೀನ ಪ್ರಕ್ರಿಯೆ ಹಾಗೂ ನೀರು ಶೇಖರಣ ಜಲಾಶಯಗಳ ಕಾಮಗಾರಿಗಳು ಪ್ರಾರಂಭವಾಗದೆ ಇರುವುದರಿಂದ ಎತ್ತಿನ ಹೊಳೆ ಯೋಜನೆ ಅನುಷ್ಠಾನದ ಕುರಿತು ಪ್ರಸ್ತಾಪಿಸುವುದು.

೦೬. **ಶ್ರೀಯುತರುಗಳಾದ ಎನ್.ರವಿಕುಮಾರ್, ಪುಟ್ಟಣ್ಣ, ಎಸ್.ವ್ಹಿ. ಸಂಕನೂರ, ಎಸ್.ರುದ್ರೇಗೌಡ, ಪ್ರತಾಪ್ ಸಿಂಹ ನಾಯಕ್, ಡಾ. ತಳವಾರ್ ಸಾಬಣ್ಣ ಮತ್ತು ಮುನಿರಾಜು ಗೌಡ** ಪಿ.ಎಂ. ಅವರುಗಳು ದೇವಸ್ಥಾನಗಳ ಅಭಿವೃದ್ಧಿಗಾಗಿ ದಾನದ ರೂಪದಲ್ಲಿ ಪಡೆಯಲಾಗುವ ಭೂಮಿಯನ್ನು ಅಕ್ರಮವಾಗಿ ಪರಭಾರೆ ಮಾಡುತ್ತಿರುವುದರಿಂದ ದೇವಸ್ಥಾನಗಳ ಪೂಜೆಗೆ ಬಹಳ ತೊಂದರೆಯಾಗುತ್ತಿದ್ದು, ದಾನವಾಗಿ ಪಡೆದ ದೇವಸ್ಥಾನಗಳ ಭೂಮಿಯನ್ನು ದೇವರ ಹೆಸರಿನಲ್ಲಿಯೇ ಖಾತೆ/ಪಹಣಿ ಮಾಡುವ ಕುರಿತು ಪ್ರಸ್ತಾಪಿಸುವುದು.

೦೭. **ಶ್ರೀ ಸಿ.ಎಂ. ಲಿಂಗಪ್ಪ** ಅವರು ರಾಮನಗರ ತಾಲ್ಲೂಕಿನಲ್ಲಿ ಭೂ ಮಂಜೂರಾತಿ ಸಮಿತಿ ರಚನೆಗೊಂಡಾಗಿನಿಂದಲೂ ಒಂದು ಬಾರಿಯು ಸಭೆ ಸೇರದೆ ಇರುವುದರಿಂದ 2004ನೇ ಸಾಲಿನಿಂದಲೂ ಅರ್ಜಿಗಳು ವಿಲೇವಾರಿಯಾಗದೆ ಬಾಕಿ ಉಳಿದಿರುವುದಲ್ಲದೆ ಭೂ ಮಂಜೂರಾತಿ ಸಮಿತಿಯಿಂದ ಮಂಜೂರಾಗಿರುವ ಗೋಮಾಳ ಭೂಮಿಗಳಿಗೆ ಸಾಗುವಳಿ ಪತ್ರ ಸಹ ನೀಡದಿರುವುದರಿಂದ ಅರ್ಜಿದಾರರಿಗೆ ತೀವ್ರ ತೊಂದರೆಯಾಗುತ್ತಿರುವ ಕುರಿತು ಪ್ರಸ್ತಾಪಿಸುವುದು.

## 06. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯಕ್ಕೆ ಸರ್ಕಾರದಿಂದ ಉತ್ತರ

| | |
|---|---|
| ಶ್ರೀ ಎಸ್.ಆರ್. ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಶ್ರೀ ಎಂ.ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಅವರುಗಳು | ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಠಿಯಿಂದ ರೈತರ ಬೆಳೆಗಳು ನಾಶವಾಗಿ, ಜಾನುವಾರುಗಳ ಪ್ರಾಣ ಹಾನಿಯಾಗಿ ಸಾರ್ವಜನಿಕ ಆಸ್ತಿಗಳಿಗೆ ಧಕ್ಕೆ ಉಂಟಾಗಿರುವ ಸಮಸ್ಯೆಗಳ ಕುರಿತು. |

## 07. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ) ಮೈಸೂರು ಲ್ಯಾಂಪ್ಸ್ ಕಾರ್ಖಾನೆಯ ಜಾಗದಲ್ಲಿ ವಸ್ತು ಸಂಗ್ರಹಾಲಯ ನಿರ್ಮಿಸುತ್ತಿರುವ ಕುರಿತು ದಿನಾಂಕ:14.12.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:16 (214 + 176)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕಾಂತರಾಜು (ಬಿಎಂಎಲ್) ಮತ್ತು ಶ್ರೀ ಕೆ.ಎ.ತಿಪ್ಪೇಸ್ವಾಮಿ** ಅವರುಗಳಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ) "ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆ ಮತ್ತು ಪರಿಸರ ಪುನಃಶ್ಚೇತನ" ಕುರಿತು ದಿನಾಂಕ:14.12.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:23 (192)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಪಿ.ಆರ್. ರಮೇಶ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
**www.kla.kar.nic.in/council/council.htm**